RNU AIR DHARWAD

# OCTOBER 02 OCT 02, 2025
# AKASHAVANI - DHARWAD
# PRADESH SAAMACHARA (KANNADA) 07.05 A.M

<><><>

ಆಕಾಶವಾಣಿಯ ನಮ್ಮ ಆತ್ಮೀಯ ಕೇಳುಗರಿಗೆಲ್ಲ ವಿಜಯದಶಮಿ ಹಾಗೂ ದಸರಾ ಮಹೋತ್ಸವದ ಹಾರ್ದಿಕ ಶುಭಾಶಯಗಳು.

ಮುಖ್ಯಾಂಶಗಳು

- ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವದ ಜಂಬೂ ಸವಾರಿಗೆ ಕ್ಷಣಗಣನೆ.
- ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ಒದಗಿಸಲು ಶೀಘ್ರದಲ್ಲೇ ಕ್ರಮ ಕೈಗೊಳ್ಳುವುದಾಗಿ ಸಚಿವ ಈಶ್ವರ ಖಂಡ್ರೆ ಭರವಸೆ.
- ದೇಶಾದ್ಯಂತ ಬೇಳೆಕಾಳು ಉತ್ಪಾದನೆಯಲ್ಲಿ ಆತ್ಮ ನಿರ್ಭರತೆ ಸಾಧಿಸುವ ಅಭಿಯಾನಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ.
- ಇಂದು ರಾಷ್ಟ್ರಪಿತ ಗಾಂಧೀಜಿ ಹಾಗೂ ಲಾಲ ಬಹದ್ದೂರ ಶಾಸ್ತ್ರಿ ಜಯಂತಿ.

ಈಗ ವಾರ್ತೆಗಳ ವಿವರ

ಇಂದು ನಾಡಿನಾದ್ಯಂತ ವಿಜಯ ದಶಮಿ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸಲಾಗುತ್ತಿದೆ. ಅನ್ಯಾಯದ ವಿರುದ್ಧ ನ್ಯಾಯದ ಜಯ, ಅಸತ್ಯದ ವಿರುದ್ಧ ಸತ್ಯದ ಜಯ ಹಾಗೂ ಅಂಧಕಾರದ ವಿರುದ್ಧ ಬೆಳಕಿನ ವಿಜಯದ ಸಂಕೇತವೇ ವಿಜಯ ದಶಮಿ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ವಿಜಯದಶಮಿಯ ಹಬ್ಬಕ್ಕೆ ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ. ಈ ಹಬ್ಬವು ಅಧರ್ಮದ ಮೇಲೆ ಧರ್ಮದ ವಿಜಯವನ್ನು ಸಂಕೇತಿಸುತ್ತದೆ. ಜನರು ಸತ್ಯ ಮತ್ತು ನ್ಯಾಯದ ಮಾರ್ಗವನ್ನು ಅನುಸರಿಸಲು ಪ್ರೇರೇಪಿಸುತ್ತದೆ ಎಂದು ಹೇಳಿದ್ದಾರೆ. ಮೈಸೂರಿನಲ್ಲಿ ಇಂದು ಮಧ್ಯಾಹ್ನ ಅಂಬಾವಿಲಾಸ ಅರಮನೆಯಿಂದ ನಾಡಿನ ಕಲೆ ಹಾಗೂ ಸಂಸ್ಕೃತಿಯನ್ನು ಬಿಂಬಿಸುವ ಪ್ರತಿ ಜಿಲ್ಲೆಯ ಭೌಗೋಳಿಕ ಸ್ತಬ್ಧಚಿತ್ರಗಳ ಜೊತೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಇಲಾಖೆಯ ಸ್ತಬ್ಧ ಚಿತ್ರಗಳು ಹಾಗೂ 60 ಕ್ಕೂ ಹೆಚ್ಚು ಕಲಾ ತಂಡಗಳು ಜಂಬೂ ಸವಾರಿಯಲ್ಲಿ ಪಾಲ್ಗೊಳ್ಳಲಿವೆ. ಮಧ್ಯಾಹ್ನ 1 ಗಂಟೆಯಿಂದ 1 ಗಂಟೆ 18 ನಿಮಿಷದವರೆಗೆ ಧನುರ್ ಶುಭ ಲಗ್ನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವ ಸಹದ್ಯೋಗಿಗಳು ಅಂಬಾವಿಲಾಸ ಅರಮನೆಯ ಬಲರಾಮ ದ್ವಾರದ ಬಳಿ ನಂಧಿಧ್ವಜಕ್ಕೆ ಪೂಜೆ ಸಲ್ಲಿಸಲಿದ್ದಾರೆ. ನಂತರ ನೌಪತ್ ಆನೆ ಸೇರಿದಂತೆ ಒಟ್ಟು 14 ಆನೆಗಳು ಜಂಬೂ ಸವಾರಿಯ ಮೆರವಣಿಗೆಯಲ್ಲಿ ಸಾಗಲಿವೆ. ಅರಮನೆ ಆವರಣದಲ್ಲಿ ಸಂಜೆ 4 ಗಂಟೆ 42 ನಿಮಿಷದಿಂದ 5 ಗಂಟೆ 6 ನಿಮಿಷದವರೆಗೆ ಸಲ್ಲುವ ಕುಂಭ ಲಗ್ನದಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ರವರು ಚಿನ್ನದ ಅಂಬಾರಿಗೆ ಪುಷ್ಪಾರ್ಚನೆ ಮಾಡುವ ಮುಖಾಂತರ ಜಂಬೂ ಸವಾರಿಗೆ ಚಾಲನೆ ನೀಡಲಿದ್ದಾರೆ. ಚಿನ್ನದ ಅಂಬಾರಿಯ ಸುತ್ತ ಕೇಂದ್ರ ರಕ್ಷಣಾ ಪಡೆ ಸುರಕ್ಷತೆ ವಹಿಸಿದ್ದು ಯಾವುದೇ ರೀತಿಯ ಅವಘಡವಾಗದಂತೆ 5 ಸಾವಿರಕ್ಕೂ ಹೆಚ್ಚು ಪೊಲೀಸರನ್ನು ನಿಯೋಜಿಸಲಾಗಿದೆ. ಸಂಜೆ 7 ಗಂಟೆಗೆ ಮೈಸೂರಿನ ಬನ್ನಿಮಂಟಪದ ಮೈದಾನದಲ್ಲಿ ಪಂಜಿನ ಕವಾಯತನ್ನು, ರಾಜ್ಯಪಾಲರು ವೀಕ್ಷಿಸಿ ಗೌರವ ವಂದನೆ ಸ್ವೀಕರಿಸಲಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಂಡಿರುವ ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆಯ ಜಲ ಜೀವನ್ ಮಿಷನ್

ಯೋಜನೆಯ ಸ್ತಬ್ದ ಚಿತ್ರವು ಇಂದು  ಮೈಸೂರು ದಸರಾ ಮಹೋತ್ಸವದ ಜಂಬೂ ಸವಾರಿಯಲ್ಲಿ ಪ್ರದರ್ಶನಗೊಳ್ಳಲಿದೆ. ಕೋಲಾರ ಜಿಲ್ಲೆ, ನಾಡಹಬ್ಬ ದಸರಾ ಮೆರವಣಿಗೆಯಲ್ಲಿ ರೇ ್ಮೆ, ಹಾಲು, ಮಾವಿಗೆ ಸಂಬಂಧಿಸಿದ ಮಾಹಿತಿಯುಳ್ಳ ಸ್ತಬ್ಧಚಿತ್ರ ಪ್ರದರ್ಶಿಸಲಿದೆ. ಇಂದು ಸಂಜೆ 4 ಗಂಟೆಯಿಂದ ಮಂಗಳೂರು ದಸರಾದ ವೈಭವದ ಶೋಭಯಾತ್ರೆ ನಡೆಯಲಿದ್ದು, ರಾಜ್ಯದ ವಿವಿಧ ಜಿಲ್ಲೆಗಳಿಂದ ಕಲಾತಂಡಗಳು ಪಾಲ್ಗೊಳ್ಳಲಿವೆ ಎಂದು ಕುದ್ರೋಳಿ ಕ್ಷೇತ್ರದ ಕೋಶಾಧಿಕಾರಿ ಪದ್ಮರಾಜ್ .ಆರ್. ತಿಳಿಸಿದ್ದಾರೆ. ಮಡಿಕೇರಿಯಲ್ಲಿ ಇಂದು ರಾತ್ರಿ ದಶ ಮಂಟಪಗಳ ಶೋಭಾಯಾತ್ರೆಯೊಂದಿಗೆ ದಸರಾ ಜರುಗಲಿದೆ.  ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ಗೋಣಿಕೊಪ್ಪದಲ್ಲಿ ವೈಭವದ ದಸರಾ ಆಚರಣೆ ಹಿನ್ನೆಲೆಯಲ್ಲಿ, ಜನರ ಸುರಕ್ಷತೆಯನ್ನು ಗಮನದಲ್ಲಿಟ್ಟು ಅಗತ್ಯ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿ ್ಠಾಧಿಕಾರಿ ಕೆ.ರಾಮರಾಜನ್ ಮಾಹಿತಿ ನೀಡಿದ್ದಾರೆ. ಹಾವೇರಿ ಜಿಲ್ಲೆ ಸವಣೂರು ತಾಲೂಕಿನ ಕಾರಡಗಿಯ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಇಂದು ವಿಜಯದಶಮಿ ಅಂಗವಾಗಿ, ಬೆಳಗ್ಗೆ ಮಹಾ ರುದ್ರಾಭಿಷೇಕ, ರಾತ್ರಿ ಬನ್ನಿ ಮುಡಿಯುವುದು, ನಂತರ ರಾತ್ರಿ 9 ಗಂಟೆಗೆ ಕಾರ್ಣಿಕೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ.

<><><>

ಅತಿವೃಷ್ಟಿಯಿಂದಾಗಿ ಭಾಲ್ಕಿ ತಾಲೂಕಿನ ಮಹಾರಾಷ್ಟ್ರ ಗಡಿಭಾಗದ ಮಾಂಜ್ರಾ ನದಿ ತೀರದ ಸಾಯಿಗಾವ್, ಮೇಹಕರ, ಹಲ್ಸಿ ತೂಗಾವ್, ವಾಂಜೆರ್ಖೇಡ್, ಕೊಂಗಳಿ ಸೇರಿದಂತೆ ಪ್ರವಾಹ ಪೀಡಿತ ಗ್ರಾಮಗಳಿಗೆ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿದರು. ಸಂಕ ್ಟದಲ್ಲಿರುವ ರೈತ ಬಾಂಧವರಿಗೆ ಸರ್ಕಾರದಿಂದ ಹೆಚ್ಚುವರಿ 8 ಸಾವಿರದ 500 ಪರಿಹಾರ ಸೇರಿದಂತೆ, ಒಟ್ಟು 17 ಸಾವಿರ ಖುಷ್ಕಿ ಜಮೀನಿಗೆ, 25 ಸಾವಿರ ನೀರಾವರಿ ಜಮೀನಿಗೆ ಹಾಗೂ 31 ಸಾವಿರ ಬಹು ವಾರ್ಷಿಕ ಬೆಳೆಗಳಿಗೆ ಪರಿಹಾರ ಒದಗಿಸಲಾಗುವುದು. ದೀಪಾವಳಿ ಹಬ್ಬದೊಳಗಾಗಿ ರೈತ ಬಾಂಧವರಿಗೆ ಪರಿಹಾರ ತಲುಪುವಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

<><><>

ದೇಶಾದ್ಯಂತ ಬೇಳೆಕಾಳು ಉತ್ಪಾದನೆಯಲ್ಲಿ ಆತ್ಮ ನಿರ್ಭರತೆ ಸಾಧಿಸುವ ಅಭಿಯಾನಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಸಂಪುಟ ಸಭೆಯ ನಿರ್ಣಯಗಳ ಕುರಿತು ದೆಹಲಿಯಲ್ಲಿ ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈ ್ಣವ್, ಬಡಜನರ ಪೌಷ್ಟಿಕ ಆಹಾರವಾದ ಬೇಳೆಕಾಳುಗಳ ಬೆಂಬಲ ಬೆಲೆ ಖರೀದಿ ಮೊತ್ತವನ್ನು 45 ಸಾವಿರ ಕೋಟಿ ರೂಪಾಯಿಯಿಂದ 60 ಸಾವಿರ ಕೋಟಿ ರೂಪಾಯಿಗೆ ಏರಿಕೆ ಮಾಡಲಾಗಿದೆ ಎಂದರು.

<><><>

ಈಗ ಪ್ರಕಟಣೆ,
ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು..

(30 ಸೆಕೆಂದುಗಳು)

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ದೇಶದ ದೂರದ ಗಡಿಯಾಗಿ ಕಾಣುತ್ತಿದ್ದ ಈಶಾನ್ಯ ಭಾರತವು ಈಗ ಪ್ರಗತಿ, ಶಾಂತಿ ಮತ್ತು ಸಾಮರ್ಥ್ಯದ ಸಂಕೇತವಾಗಿದೆ. ಕಳೆದ ಹನ್ನೊಂದು ವರ್ಷಗಳಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು, ಈಶಾನ್ಯ ಭಾರತದ ಸಮಗ್ರ ಅಭಿವೃದ್ಧಿಗಾಗಿ ಪರಿವರ್ತನಾ ದೃಷ್ಟಿಕೋನವನ್ನು ಅನುಸರಿಸಿದೆ. ಮಾರ್ಚ್ 23, 2025 ರಂದು ನವದೆಹಲಿಯಲ್ಲಿ ಜರುಗಿದ

'ರೈಸಿಂಗ್ ನಾರ್ತ್ ಈಸ್ಟ್' ಹೂಡಿಕೆದಾರರ ಶೃಂಗಸಭೆಯಲ್ಲಿ ಮಾತನಾಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶದ ಅಭಿವೃದ್ಧಿ ಸಾಧಿಸುವಲ್ಲಿ ಪೂರ್ವ ಭಾರತದ ನಿರ್ಣಾಯಕ ಪಾತ್ರವನ್ನು ಒತ್ತಿ ಹೇಳಿದ್ದಾರೆ.
ಧ್ವನಿ– ಪ್ರಧಾನಮಂತ್ರಿ (30 ಸೆಕೆಂದುಗಳು)

<><><>

ಇಂದು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 156ನೇ ಜಯಂತಿ. ಸತ್ಯ, ಅಹಿಂಸೆ ತತ್ವಗಳ ಅಡಿಪಾಯದಡಿ,ಸತ್ಯಾಗ್ರಹ, ಅಸಹಕಾರ ಚಳವಳಿಗಳ ಮೂಲಕ, ದೇಶದ ಸ್ವಾತಂತ್ರ್ಯ ಸಂಗ್ರಾಮದ ಮುಂಚೂಣಿ ನಾಯಕತ್ವ ವಹಿಸಿದ್ದ ಮೋಹನದಾಸ ಕರಮಚಂದ ಗಾಂಧಿ ಅವರ ಜನ್ಮ ದಿನ. ಸ್ವದೇಶಿ ಬಳಕೆಗೆ ಕರೆ ನೀಡಿ, ಗ್ರಾಮ ಸ್ವರಾಜ್ಯಕ್ಕೆ ಒತ್ತು ನೀಡಿದ್ದ, ಮಹಾತ್ಮ ಗಾಂಧೀಜಿ ಅವರ ಸರ್ವೋದಯ ಚಿಂತನೆಯ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಉಡುಪಿ ಜಿಲ್ಲೆ ಮಣಿಪಾಲ ವಿಶ್ವವಿದ್ಯಾಲಯದ, ಗಾಂಧಿಯನ್ ಸೆಂಟರ್ ಫಾರ್ ಫಿಲಾಸಾಫಿಕಲ್ ಆರ್ಟ್ಸ್ ಆ್ಯಂಡ್ ಸೈನ್ಸ್ ಸೆಂಟರ್ ಮುಖ್ಯಸ್ಥರಾದ ಪ್ರೊಫೆಸರ್ ವರದೇಶ ಹಿರೇಗಂಗೆ.

ಧ್ವನಿ–ಪ್ರೊ. ವರದೇಶ ಹಿರೇಗಂಗೆ ( 52 ಸೆಕೆಂದುಗಳು)

<><><>

ಪ್ರಸಿದ್ಧ ಭಾರತೀಯ ಇತಿಹಾಸಕಾರ, ಅಂಕಣಕಾರ ಮತ್ತು ಚಿಂತಕರಾದ ಡಾಕ್ಟರ್ ರಾಮಚಂದ್ರ ಗುಹಾ ಅವರನ್ನು 2025ನೇ ಸಾಲಿನ ಮಹಾತ್ಮಗಾಂಧಿ ಸೇವಾ ಪ್ರಶಸಿಗೆ ರಾಜ್ಯ ಸರ್ಕಾರ ಆಯ್ಕೆ ಮಾಡಿದೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಇಲಾಖೆಯ ವತಿಯಿಂದ ಪ್ರತಿ ವ ರ್ಷ ನೀಡಲಾಗುವ ಈ ಪ್ರಶಸ್ತಿಯನ್ನು, ಗಾಂಧೀಜಿಯವರ ಜೀವನ ಮೌಲ್ಯಗಳನ್ನು ಸಮಾಜದಲ್ಲಿ ಹರಡಲು ಮಹತ್ತರ ಕೊಡುಗೆ ನೀಡಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ಪ್ರದಾನ ಮಾಡಲಾಗುತ್ತದೆ.

<><><>

ಇಂದು ದೇಶ ಕಂಡ ಅಪ್ರತಿಮ ಆಡಳಿತಗಾರ, ಪ್ರಧಾನಮಂತ್ರಿಯಾಗಿ ಸೇವೆ ಸಲ್ಲಿಸಿದ ಸ್ವಾತಂತ್ರ್ಯ ಹೋರಾಟಗಾರರು ಆದ ಲಾಲ್ ಬಹಾದ್ದೂರ್ ಶಾಸ್ತ್ರಿ ಅವರ 121ನೇ ಜಯಂತಿ. ಗಾಂಧೀಜಿಯವರು, ದೇಶದ ನಾಗರಿಕರನ್ನು ಅಸಹಕಾರ ಚಳವಳಿಗೆ ಸೇರಲು ಕರೆ ನೀಡಿದ ಸಂದರ್ಭದಲ್ಲಿ, 16 ವರ್ಷದ ಲಾಲ್ ಬಹಾದ್ದೂರ್ ಶಾಸ್ತ್ರಿ ಮಹಾತ್ಮಾ ಗಾಂಧೀಜಿಯವರ ಕರೆಗೆ ಸ್ಪಂದಿಸಿ, ಓದನ್ನು ಬಿಟ್ಟು ಚಳವಳಿ ಸೇರಿದರು. ಬ್ರಿಟ ಿಷ್ ಆಡಳಿತಕ್ಕೆ ವಿರೋಧವಾಗಿ ಸ್ಥಾಪಿಸಲಾದ ಹಲವಾರು ರಾಷ್ಟ್ರೀಯ ಸಂಸ್ಥೆಗಳಲ್ಲೊಂದಾದ ವಾರಣಾಸಿಯ ಕಾಶಿ ವಿದ್ಯಾ ಪೀಠವನ್ನು ಲಾಲ್ ಬಹಾದ್ದೂರ ಶಾಸ್ತ್ರೀ ಸೇರಿದರು. ಅಲ್ಲಿ ಅವರು ದೇಶದ ಶ್ರೇ ಷ್ಠ ಬುದ್ಧಿಜೀವಿಗಳು ಮತ್ತು ರಾಷ್ಟ್ರೀಯವಾದಿಗಳ ಪ್ರಭಾವಕ್ಕೆ ಒಳಗಾದರು. 'ಶಾಸ್ತ್ರಿ ಎಂಬುದು ವಿದ್ಯಾಪೀಠದಿಂದ ಲಾಲ್ ಬಹದ್ದೂರರಿಗೆ ನೀಡಿದ ಪದವಿಯಾಗಿದೆ.

<><><>

'ಸ್ವಚ್ಛ ಭಾರತ, ಸ್ವಸ್ಥ ಭಾರತ' ಧ್ಯೇಯದೊಂದಿಗೆ, ಇಂದಿನಿಂದ 31 ನೇ ತಾರೀಖಿನವರೆಗೆ, ನಾಡಿನಾದ್ಯಂತ, ಸ್ವಚ್ಛತೆ ಹಾಗೂ ದೈಹಿಕ ಸ್ವಾಸ್ಥ್ಯದ ಬಗ್ಗೆ ಕಾಳಜಿ ಮೂಡಿಸುವ ಉದ್ದೇಶದಿಂದ 'ಫಿಟ್ ಇಂಡಿಯಾ ಸ್ವಚ್ಛತಾ ಫ್ರೀಡಂ ರನ್ 6.0' ಆಯೋಜಿಸಲಾಗಿದೆ. ನಾಡಿನ ಐತಿಹಾಸಿಕ ಸ್ಮಾರಕಗಳಲ್ಲಿ ಆಯೋಜಿಸಲಾದ ಸ್ವಚ್ಛತಾ ಕಾರ್ಯಕ್ರಮಗಳು ಹಾಗೂ ಫಿಟ್ ಇಂಡಿಯಾ ಓಟದ ಕ್ರಿಯಾಶೀಲ ವಿಡಿಯೋ ಹಾಗೂ ಬರೆಹ ಮಾಹಿತಿಯನ್ನು **#SwacchaBharath SwasthBharath** ಹಾಗೂ **#Run4India** ಬಳಸಿ ಹಂಚಿಕೊಳ್ಳಬಹುದು.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

- ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವದ ಜಂಬೂ ಸವಾರಿಗೆ ಕ್ಷಣಗಣನೆ.
- ಸಂಕ ್ಟದಲ್ಲಿರುವ ರೈತರಿಗೆ ಪರಿಹಾರ ಒದಗಿಸಲು ಶೀಘ್ರದಲ್ಲೇ ಕ್ರಮ ಕೈಗೊಳ್ಳುವುದಾಗಿ ಸಚಿವ ಈಶ್ವರ ಖಂಡ್ರೆ ಭರವಸೆ.
- ದೇಶಾದ್ಯಂತ ಬೇಳೆಕಾಳು ಉತ್ಪಾದನೆಯಲ್ಲಿ ಆತ್ಮ ನಿರ್ಭರತೆ ಸಾಧಿಸುವ ಅಭಿಯಾನಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ.
- ಇಂದು ರಾಷ್ಟ್ರಪಿತ ಗಾಂಧೀಜಿ ಹಾಗೂ ಲಾಲ ಬಹದ್ದೂರ ಶಾಸ್ತ್ರಿ ಜಯಂತಿ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.

<><><>